ಅಧ್ಯಕ್ಷರು:– ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

2014 ನೇ ಸಾಲಿನ ಕರ್ನಾಟಕ ಗೃಹ ರಕ್ಷಕ ದಳ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಅನುಬಂಧ–2)

(ii) ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕ, 2014

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು):– ಮಾನ್ಯ ಅಧ್ಯಕ್ಷರೆ, ಈ ಕಾನೂನು 2006ನೇ ಇಸವಿಯಲ್ಲಿ ಗೌರವಾನ್ವಿತ ಕುಮಾರಸ್ವಾಮಿಯವರು ಮುಖ್ಯಮಂತ್ರಿಯಾಗಿದ್ದಾಗ ಇದು ಜಾರಿಗೆ ಬಂತು. ಬಹಳ ಮುಖ್ಯವಾಗಿ Supreme Courtನ ಆದೇಶದಂತೆ ಈ ಇನಾಂದಾರ್ ಕೇಸಿನಲ್ಲಿ ಅದರ ನಂತರ ನಮ್ಮ Islamik Academy of Education ಏಕೆಂದರೆ ಈ Professional Collegesನಲ್ಲಿ fee, admission, regulate ಆಗಬೇಕು. ಆ ದಿಕ್ಕಿನಲ್ಲಿ ಈ capitation ಪದ್ಧತಿ ಹೋಗಬೇಕೆಂದು ಹೇಳಿ 2006ನೇ ಇಸವಿಯಲ್ಲಿ ಆದೇಶ ಬಂದಾಗ ಇದು ಜಾರಿಗೆ ಬಂತು. ಆಗಿನಿಂದ ಇವತ್ತಿನವರೆಗೆ ಈ ಕಾನೂನಿನ ಅನುಷ್ಠಾನಕ್ಕೆ ಯೋಗ ಬರುತ್ತಿಲ್ಲ. ಈ ವರ್ಷ ನಾವು ಪ್ರಯತ್ನ ಮಾಡಿದೆವು, ಈ ವರ್ಷದಿಂದ ನಾವು ಜಾರಿಗೆ ತರುತ್ತೇವೆಂದು ಹೇಳಿ ಹಾಗಾಗಿ ನಿವೃತ್ತ High Court Judgeರವರ ಅಧ್ಯಕ್ಷತೆಯಲ್ಲಿ High Courtನಲ್ಲಿ ಒಂದು Free Regulatory Committee, Admission Regulatory Committee ಮಾಡಿ ಈ ಕಾನೂನಿಗೆ ಚಾಲನೆಯನ್ನು ಕೊಟ್ಟೆವು. ಆದರೆ ಇದಾದನಂತರ ಕೆಲವು ವಿದ್ಯಾರ್ಥಿ ಸಂಘಟನೆಗಳು, ಕೆಲವು ರಾಜಕೀಯ ಪಕ್ಷದ ಸ್ನೇಹಿತರು ಇದರಲ್ಲಿ ಹೆಚ್ಚಿನ ಹಿತ ಕರ್ನಾಟಕದ ವಿದ್ಯಾರ್ಥಿಗಳ ಹಿತ ಕಾಪಾಡುವುದಕ್ಕೆ ಸಾಧ್ಯವಾಗುತ್ತಿಲ್ಲ. SC/STಗೆ, Backward Classesಗೆ ನಾವು ಮೀಸಲಾತಿಯನ್ನು ಕೊಟ್ಟಿದ್ದೆವು. ಹಾಗಾಗಿ ಇದರ ಬಗ್ಗೆ ಪುನರ್ ಪರಿಶೀಲನೆ ಆಗಬೇಕೆಂದು ಹೇಳಿದಾಗ ಕರ್ನಾಟಕದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮತ್ತು ಕೆಲವು ರಾಜಕೀಯ ಪಕ್ಷಗಳು ಸಹ ಇದರ ಬಗ್ಗೆ ಒತ್ತಾಯ ಮಾಡಿದ್ದರಿಂದ ಈ ಕಾನೂನನ್ನು ಜಾರಿಗೆ ತಂದೆವು. ಇಲ್ಲಿ ನಾವು ಎಲ್ಲಾ ಪ್ರಯತ್ನಗಳನ್ನು ಮಾಡಿದೆವು. ಇದಕ್ಕೆ ಸಂಬಂಧಿಸಿದಂತೆ retired High Court Judge ಸಹ appoint ಆಗಿದ್ದರು. ಹಾಗಾಗಿ ನಾವು ಈಗಾಗಲೇ ಒಪ್ಪಂದ ಮಾಡಿದ್ದೇವೆ. ಅದರ ಪ್ರಕಾರ ಈ ವರ್ಷ ಈ ಕಾನೂನು ಜಾರಿಗೆ ತರುತ್ತಿಲ್ಲ. ಹಾಗಾಗಿ ಆ ಕಾನೂನನ್ನು suspend ಇಡಬೇಕಾಗಿ ಪ್ರತಿ ವರ್ಷದಂತೆ ಈ ವರ್ಷವೂ ಮಾಡುತ್ತೇವೆ. ಆದರೆ ನಾನು ಬಹಳ ಸ್ಪಷ್ಟವಾಗಿ ನಮ್ಮ ಈ ಮೇಲ್ಮನೆಯಲ್ಲಿ ಹೇಳಿದ್ದೇನೆ. ಈ ಕಾನೂನು ಜಾರಿಗೆ ಬರಬೇಕಾಗುತ್ತದೆ. ಅದು

ಬರುವುದಕ್ಕೆ ಮುಂಚಿತವಾಗಿ managementನವರ ಜೊತೆ, Academicians ಜೊತೆ ಮತ್ತು ವಿದ್ಯಾರ್ಥಿ ಸಂಘಟನೆಯ ಜೊತೆ ಚರ್ಚೆ ಮಾಡಿದ್ದೇವೆ. ನಮ್ಮ ವಿರೋಧಪಕ್ಷದ ನಾಯಕರ ಜೊತೆಯಲ್ಲಿ ಚರ್ಚೆ ಮಾಡಿ ಈ ಕಾನೂನಿನಲ್ಲಿ ಯಾವ ರೀತಿಯಾಗಿ Common Entrance Test ಈಗ ಎರಡು ಟೆಸ್ಟ್‌ಗಳು ಆಗುತ್ತಿವೆ, ಒಂದೇ ಟೆಸ್ಟ್ ಮಾಡುವುದಕ್ಕೆ ಸಾಧ್ಯವೇನು, ಕರ್ನಾಟಕ ರಾಜ್ಯದ ವಿದ್ಯಾರ್ಥಿಗಳ ಹಿತ, ಅದರಲ್ಲಿಯೂ merit Students ಹಿತ, ಅದರ ಜೊತೆಯಲ್ಲಿ SC/ST Backward classes ಹಿತ ಯಾವ ಪ್ರಕಾರವಾಗಿ protect ಮಾಡುವುದಕ್ಕೆ ಸಾಧ್ಯ ಎನ್ನುವುದರ ಸಲುವಾಗಿ ಈ ಕಾನೂನನ್ನು ಈ ವರ್ಷ ಜಾರಿಗೆ ತಂದಿಲ್ಲ. ಮುಂದಿನ ವರ್ಷದಿಂದ ಈ ಕಾನೂನನ್ನು ಜಾರಿಗೆ ತರುತ್ತಿದ್ದೇವೆ. ಈ ಸದನವು ಈ ವರ್ಷ ಈ ಬಿಲ್ ಅನ್ನು suspend ಇಡುವುದಕ್ಕೆ ಅನುಮತಿ ಕೊಡಬೇಕಾಗಿ ನಾನು ಸದನದ ಗೌರವಾನ್ವಿತ ಸದಸ್ಯರ ಜೊತೆ ವಿನಂತಿ ಮಾಡುತ್ತಿದ್ದೇನೆ.

ಅಧ್ಯಕ್ಷರು:– ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2014ನೇ ಸಾಲಿನ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ

2 ರಿಂದ 8ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ

2 ರಿಂದ 8ರವರೆಗಿನ ಖಂಡಗಳು ವಿಧೇಯಕದ ಅಂಗವಾದವು.

ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವದ ಅಂಗೀಕಾರ

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು):– ಮಾನ್ಯ ಅಧ್ಯಕ್ಷರೆ, 2014ನೇ ಸಾಲಿನ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವವನ್ನು ಮಂಡಿಸಲಾಯಿತು.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

2014ನೇ ಸಾಲಿನ ಕರ್ನಾಟಕ ವೃತ್ತಿ ಶಿಕ್ಷಣ ಸಂಸ್ಥೆಗಳ (ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ) (ವಿಶೇಷ ಉಪಬಂಧಗಳು) ವಿಧೇಯಕವನ್ನು ಅಂಗೀಕರಿಸಬೇಕೆಂದು ವಿನಂತಿಸುತ್ತೇನೆ.

ಪ್ರಸ್ತಾವದ ಪರವಾಗಿರುವವರು **"ಹೌದು"** ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು **"ಇಲ್ಲ"** ಎಂದು ಸೂಚಿಸಬೇಕು

ಪ್ರಸ್ತಾವವು **"ಹೌದು"** ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು **"ಹೌದು"** ಎನ್ನುವವರ ಪರವಾಗಿದೆ

ಪ್ರಸ್ತಾವಕ್ಕೆ **"ಹೌದು"** ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಅನುಬಂಧ–3)